# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1042 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ |
| ಉತ್ತರಿಸುವ ದಿನಾಂಕ | : | 14.12.2023 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಗೃಹ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಪಾರದರ್ಶಕವಾಗಿ ನೇಮಕ ಮಾಡಿಕೊಳ್ಳಲು ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ; | ಒಳಾಡಳಿತ ಇಲಾಖೆಯ ಅಧೀನ ಕ್ಷೇತ್ರ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿಯಲ್ಲಿ ಪಾರದರ್ಶಕವಾಗಿ ನೇಮಕ ಮಾಡಿಕೊಳ್ಳಲು ಕೈಗೊಂಡ ಕ್ರಮದ ವಿವರ ಈ ಕೆಳಕಂಡಂತಿದೆ.<br><br>**<u>ಪೊಲೀಸ್ ಇಲಾಖೆ:</u>**<br><br>• ವಿವಿಧ ವೃಂದದ ಹುದ್ದೆಗಳ ಲಿಖಿತ ಪರೀಕ್ಷೆಗೆ ಪ್ರಶ್ನೆಪತ್ರಿಕೆ ತಯಾರಿಕೆ ಸಮಿತಿಯಲ್ಲಿರುವ ಅಧಿಕಾರಿಗಳ ಹೆಸರುಗಳನ್ನು ಗೌಪ್ಯವಾಗಿ ಇಡಲಾಗುತ್ತದೆ.<br><br>• ಪ್ರಶ್ನೆಪತ್ರಿಕೆ ಮುದ್ರಣವನ್ನು ಬಾಹ್ಯ ಸಂಸ್ಥೆಯವರಿಂದ ಮಾಡಿಸಲಾಗುವುದು ಹಾಗೂ ಸದರಿ ಬಾಹ್ಯ ಸಂಸ್ಥೆಯವರ ವಿವರಗಳನ್ನು ಗೌಪ್ಯವಾಗಿ ಇಡಲಾಗುತ್ತದೆ.<br><br>• ನೇಮಕಾತಿಯ ಪ್ರಕ್ರಿಯೆಯ ವಿವಿಧ ಹಂತಗಳಾದ ಪ್ರಶ್ನೆ ಪತ್ರಿಕೆ ಸ್ವೀಕರಣೆ, ಸಂಗ್ರಹಣೆ, ವಿತರಣೆ, ಸ್ಕ್ಯಾನಿಂಗ್, ಮೌಲ್ಯಮಾಪನ, ಮತ್ತು ದೈಹಿಕ ಪರೀಕ್ಷೆಗೆ ಪ್ರತ್ಯೇಕ ಅಧಿಕಾರಿಗಳ ಸಮಿತಿಯನ್ನು ರಚಿಸಿ, ಅವರಿಗೆ ಯಾವುದೇ ಬಾಹ್ಯ ಒತ್ತಡ ಇಲ್ಲದಂತೆ ಸ್ವತಂತ್ರವಾಗಿ ನೇಮಕಾತಿಯ ಕರ್ತವ್ಯಗಳನ್ನು ಪಾರದರ್ಶಕವಾಗಿ ಸೂಕ್ತ ರೀತಿಯಲ್ಲಿ ನಿರ್ವಹಿಸಲಾಗುತ್ತಿದೆ.<br><br>• ರಾಜ್ಯಾದ್ಯಂತ ನಡೆಯುವ ಪೊಲೀಸ್ ಇಲಾಖೆಯ ವಿವಿಧ ವೃಂದದ ಹುದ್ದೆಗಳ ಲಿಖಿತ ಪರೀಕ್ಷೆ ಹಾಗೂ ದೈಹಿಕ ಪರೀಕ್ಷೆಗಳ ಎಲ್ಲಾ ಹಂತಗಳನ್ನು ದಾಖಲಿಸಲು ಸಿ.ಸಿ.ಟಿ.ವಿ.ಗಳನ್ನು ಅಳವಡಿಸಲಾಗುತ್ತಿದೆ.<br><br>• ಸದರಿ ಪರೀಕ್ಷೆಗಳನ್ನು ಸುಗಮ ಹಾಗೂ ಪಾರದರ್ಶಕವಾಗಿ ನಡೆಸಲು ಪ್ರತಿ ಹಂತದಲ್ಲೂ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಭದ್ರತೆ ಹಾಗೂ ಬಂದೋಬಸ್ತಿಗಾಗಿ ನಿಯೋಜಿಸಲಾಗುತ್ತಿದೆ.<br><br>• ಲಿಖಿತ ಮತ್ತು ದೈಹಿಕ ಪರೀಕ್ಷೆಗಳಿಗೆ ಹಾಜರಾಗುವ ನಕಲಿ ಅಭ್ಯರ್ಥಿಗಳನ್ನು ತಡೆಗಟ್ಟುವ ಸಲುವಾಗಿ ಎಲ್ಲಾ ಅಭ್ಯರ್ಥಿಗಳಿಗೆ ಬೆರಳು ಮುದ್ರೆ ಸಂಗ್ರಹವನ್ನು ಬಯೋಮೆಟ್ರಿಕ್ ಯಂತ್ರದ ಮೂಲಕ ಹಾಗೂ ಮುಖ ಚಹರೆಯನ್ನು ವೆಬ್‌ಕ್ಯಾಮರ ಮೂಲಕ ಕಡ್ಡಾಯವಾಗಿ ಪಡೆಯಲಾಗುತ್ತಿದೆ. |

| | | |
|---|---|---|
| | | • ಎಲ್ಲಾ ಪರೀಕ್ಷಾ ಕೇಂದ್ರಗಳ ದ್ವಾರಗಳಲ್ಲಿ Frisking Metal Detector ಗಳನ್ನು ಅಳವಡಿಸಿ ಬ್ಲೂಟೂಥ್ ಮತ್ತು ಎಲೆಕ್ಟ್ರಾನಿಕ್ ಉಪಕರಣಗಳನ್ನು ಅಕ್ರಮವಾಗಿ ಬಳಸುವುದನ್ನು ತಡೆಗಟ್ಟಲಾಗುತ್ತಿದೆ.<br><br>• ಅಭ್ಯರ್ಥಿಗಳು ಪಡೆಯುವ ಅಂಕಗಳಲ್ಲಿ ಪಾರದರ್ಶಕತೆ ತರುವ ಸಲುವಾಗಿ ಪರೀಕ್ಷಾ ಬರೆಯುವ ಎಲ್ಲಾ ಅಭ್ಯರ್ಥಿಗಳಿಗೆ ಓ.ಎಂ.ಆರ್. ಶೀಟ್‌ನ ಕಾರ್ಬನ್ ಪ್ರತಿಯನ್ನು ನೀಡಲಾಗುವುದು. ಸದರಿ ಕಾರ್ಬನ್ ಪ್ರತಿಯನ್ನು ಬಳಸಿಕೊಂಡು ಅಭ್ಯರ್ಥಿಗಳು ಕೀ ಉತ್ತರಗಳನ್ನು ಬಳಸಿ ಅಂಕಗಳನ್ನು ಪರಿಶೀಲಿಸಿಕೊಳ್ಳ ಬಹುದಾಗಿರುತ್ತದೆ.<br><br>• ಲಿಖಿತ ಪರೀಕ್ಷೆಯಲ್ಲಿ ಇತರೆ ಅಕ್ರಮ ಚಟುವಟಿಕೆಗಳು ನಡೆಸುವ ಮುನ್ಸೂಚನೆಗಳು ಕಂಡುಬಂದಲ್ಲಿ ಮುಂಜಾಗ್ರತೆ ಯಾಗಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮತ್ತು ನಿಗಾ ವಹಿಸಬೇಕೆಂದು ಹಾಗೂ ಅವರ ಕಾರ್ಯಚಟುವಟಿಕೆಗಳ ಮೇಲೆ ಗಮನಹರಿಸಿ Preventive Section ಗಳನ್ನು ಅಳವಡಿಸಿ ಇಲಾಖಾ ನಿಯಮಗಳನ್ವಯ ಸೂಕ್ತ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>• ಅಭ್ಯರ್ಥಿಗಳನ್ನು ಪರೀಕ್ಷಾ ಕೇಂದ್ರಗಳಿಗೆ Randomization ಮೂಲಕ ಹಂಚಿಕೆ ಮಾಡಲಾಗುತ್ತಿದೆ.<br><br>• ಪರೀಕ್ಷಾ ರಹಸ್ಯ ಸಾಮಾಗ್ರಿಗಳನ್ನು ಪರೀಕ್ಷಾ ಕೇಂದ್ರಗಳಿಗೆ ಕಳುಹಿಸುವಾಗ ಹಾಗೂ ಪರೀಕ್ಷೆ ಮುಗಿದ ನಂತರ ಪರೀಕ್ಷಾ ಕೇಂದ್ರಗಳಿಂದ ನೇಮಕಾತಿ ವಿಭಾಗಕ್ಕೆ ಸಾಗಿಸುವಾಗ One Time Lock & Number Lock ಗಳನ್ನು ಅಳವಡಿಸಲಾಗುತ್ತಿದೆ.<br><br>• ಪರೀಕ್ಷಾ ಕೇಂದ್ರ ಹಾಗೂ ಪರೀಕ್ಷೆ ನಡೆಯುವ ಸ್ಥಳಗಳ ಗೌಪ್ಯತೆಯ ಹಿನ್ನಲೆಯಲ್ಲಿ ಅಭ್ಯರ್ಥಿಗಳಿಗೆ 15 ದಿನಗಳಿಗೆ ಮೊದಲು ಪರೀಕ್ಷಾ ಬರೆಯುವ ಜಿಲ್ಲೆಯ ಮಾಹಿತಿ ಹಾಗೂ ಪರೀಕ್ಷೆ ನಡೆಯುವ 03 ದಿನಗಳ ಮುಂಚಿತವಾಗಿ ಮಾತ್ರ ಪರೀಕ್ಷಾ ಕೇಂದ್ರದ ಮಾಹಿತಿಯನ್ನು ನೀಡಲಾಗುತ್ತಿದೆ.<br><br>• ಪರೀಕ್ಷೆ ಬರೆಯುವ ಪೂರ್ವದಲ್ಲಿ ಅಭ್ಯರ್ಥಿಗಳನ್ನು ಪೊಲೀಸ್ ಸಿಬ್ಬಂದಿ ಹಾಗೂ ವೈದ್ಯಕೀಯ ಸಿಬ್ಬಂದಿಗಳ ಮೂಲಕ ತಪಾಸಣೆ ಒಳಪಡಿಸಲಾಗುತ್ತಿದೆ.<br><br>• ಲಿಖಿತ ಪರೀಕ್ಷೆ ಪೂರ್ಣಗೊಂಡ ಕೂಡಲೇ ಉತ್ತರ ಪತ್ರಿಕೆಗಳ ಸ್ಕ್ಯಾನಿಂಗ್ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುತ್ತಿದೆ.<br><br>• ಸ್ಕ್ಯಾನಿಂಗ್ ಪ್ರಕ್ರಿಯೆಯನ್ನು ಪ್ರತ್ಯೇಕ ಸಮಿತಿ ರಚಿಸಿ ಅವರ ಮೇಲ್ವಿಚಾರಣೆಯಲ್ಲಿ ನಡೆಸಲಾಗುತ್ತಿದೆ. |

**<u>ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಇಲಾಖೆ:</u>**

- ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳಾದ ಜೈಲರ್ ಮತ್ತು ವಾರ್ಡರ್‌ಗಳನ್ನು ನೇರ ನೇಮಕಾತಿ ನಿಯಮಗಳನ್ವಯ ದೈಹಿಕ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ ಮಾಡಲಾಗುತ್ತದೆ.

- ಸದರಿ ಹುದ್ದೆಗಳನ್ನು ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ, ಕಾರ್ಲಟನ್ ಭವನ, ಬೆಂಗಳೂರು ಇವರಿಂದ ಸಹಾಯಕ ಅಧೀಕ್ಷಕರು ಮತ್ತು ಲಿಪಿಕ ಸಿಬ್ಬಂದಿಗಳನ್ನು ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ನೇರ ನೇಮಕಾತಿ ಮಾಡಿಕೊಳ್ಳಲಾಗುತ್ತದೆ.

**<u>ಅಗ್ನಿಶಾಮಕ ಮತ್ತು ತುರ್ತು ಸೇವೆಗಳು:</u>**

- ಇಲಾಖೆಯಲ್ಲಿ ಪ್ರಸ್ತುತ ನಡೆಸಲಾಗುತ್ತಿರುವ ನೇಮಕಾತಿಯನ್ನು ಪೊಲೀಸ್ ನೇಮಕಾತಿ ವಿಭಾಗದಿಂದ ಸಂಯೋಜಿತವಾಗಿ ನಡೆಸಲಾಗುತ್ತಿದ್ದು, ಅಭ್ಯರ್ಥಿಗಳು ಸಲ್ಲಿಸಲಾದ ಆನ್‌ಲೈನ್ ಅರ್ಜಿಗಳ ಸಂಸ್ಕರಣೆ ಮತ್ತು ವರ್ಗಾವಾರು ವಿಂಗಡಣೆ ಹಾಗೂ ನೇಮಕಾತಿ ಹುದ್ದೆಗಳಿಗೆ ಎದುರಾಗಿ ಅಭ್ಯರ್ಥಿಗಳ ಶೈಕ್ಷಣಿಕ ಅಂಕಗಳ ಆಧಾರದಲ್ಲಿ ಜೇಷ್ಠತೆಯನುಸಾರ ವರ್ಗಾವಾರು 1:5 ರಂತೆ ಸಂದರ್ಶನಕ್ಕೆ ಅಥವಾ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಆಯ್ಕೆಮಾಡುವ ಕಾರ್ಯ ನಿರ್ವಹಿಸಲು ಹೊರ ರಾಜ್ಯದ ಬಾಹ್ಯ ಸಂಸ್ಥೆಗೆ ವಹಿಸಿ ನಿರ್ವಹಿಸಲಾಗುತ್ತಿದೆ.

- ನೇಮಕಾತಿ ಪ್ರಕ್ರಿಯೆಗಳನ್ನು ಪಾರದರ್ಶಕವಾಗಿ ನಡೆಸಲು ಇಲಾಖಾ ಹಿರಿಯ ಅಧಿಕಾರಿಗಳು ಮತ್ತು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆಗಳ ತಲಾ ಒಬ್ಬೊಬ್ಬ ಅಧಿಕಾರಿಗಳು ಒಳಗೊಂಡ ಸಮಿತಿ ರಚಿಸಿ ಅವರ ಸಮ್ಮುಖದಲ್ಲಿ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆ ನಡೆಸಲಾಗುತ್ತದೆ.

- ಸಂದರ್ಶನಕ್ಕೆ ಅಥವಾ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆ ನಡೆಸಲಾಗುವ ಇಲಾಖೆಯ ಕವಾಯಿತು ಮೈದಾನದಲ್ಲಿ ಸಿ.ಸಿ. ಕ್ಯಾಮೆರಾಗಳನ್ನು ಅಳವಡಿಸಲಾಗುತ್ತದೆ. ಮತ್ತು ಎಲ್ಲಾ ಪ್ರಕ್ರಿಯೆಗಳ ವೀಡಿಯೋ ಚಿತ್ರೀಕರಣ ಮಾಡಲಾಗುತ್ತದೆ.

- ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಹಾಜರಾಗುವ ಪ್ರತಿ ಅಭ್ಯರ್ಥಿಯ ಬೆರಳಚ್ಚು ಸ್ಕ್ಯಾನ್ ಮಾಡಿ ಅದರ ಪ್ರತಿಯನ್ನು, ಪ್ರತಿ ಅಭ್ಯರ್ಥಿಯ ಅರ್ಜಿ ಸಂಖ್ಯೆಗೆ ಜೋಡಿಸಲಾಗುತ್ತದೆ.

| | | |
|---|---|---|
| | | • ದೇಹದಾರ್ಡ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆ ಮತ್ತು ಬಾರೀ ವಾಹನ ಚಾಲನಾ ಪರೀಕ್ಷೆಗಳಲ್ಲಿ ನಿಗಧಿಪಡಿಸಲಾಗಿರುವ ನಿರ್ಧಿಷ್ಟ ಸಮಯ ಮತ್ತು ತಲುಪಬೇಕಾದ ಗುರಿಯ ಬಗ್ಗೆ ತಿಳಿಸಲಾಗುತ್ತದೆ. ನಂತರ ಅಭ್ಯರ್ಥಿಗಳಿಗೆ ಫಲಿತಾಂಶ ದಾಖಲಿಸಿದ ಪ್ರತಿಯನ್ನು ನೀಡಲಾಗುತ್ತದೆ.<br><br>• ದೇಹದಾರ್ಡ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆ ಮತ್ತು ಬಾರೀ ವಾಹನ ಚಾಲನಾ ಹಾಗೂ ನಿರ್ಧಿಷ್ಟ ಹುದ್ದೆಗೆ ನಡೆಸಲಾಗುವ ಲಿಖಿತ ಪರೀಕ್ಷೆ ಒಳಗೊಂಡಂತೆ ಎಲ್ಲಾ ಪರೀಕ್ಷೆಗಳ ಸಂಪೂರ್ಣ ವೀಡಿಯೋ ಚಿತ್ರೀಕರಣ ಮಾಡಲಾಗುತ್ತದೆ.<br><br>• ದೇಹದಾರ್ಡ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಪಡೆದ ಅಂಕಗಳು ಮತ್ತು ವಿದ್ಯಾರ್ಹತೆಯಲ್ಲಿ ಪಡೆದ ಶೇಕಡಾ ಅಂಕಗಳನ್ನು ಕೂಡಿಸಿ ಒಟ್ಟು ಅಂಕಗಳ ಆಧಾರದಲ್ಲಿ ಅಭ್ಯರ್ಥಿಗಳನ್ನು ವರ್ಗಾವಾರು ಮೀಸಲಿರಿಸಿದ ಹುದ್ದೆಗಳಿಗೆ ಆಯ್ಕೆ ಮಾಡಿ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ. ಇದರಲ್ಲಿ ಅಭ್ಯರ್ಥಿಗಳು ಪಡೆದ ಒಟ್ಟು ಅಂಕಗಳನ್ನು ನಮೂದಿಸಲಾಗುತ್ತದೆ.<br><br>**ಗೃಹ ರಕ್ಷಕ ಮತ್ತು ಪೌರ ರಕ್ಷಣಾ ಇಲಾಖೆ:**<br><br>• ಲಿಪಿಕ ಹುದ್ದೆಗಳಾದ ಪ್ರ.ದ.ಸ, ದ್ವಿ.ದ.ಸ, ಶೀಘ್ರಲಿಪಿಗಾರ ಮತ್ತು ದತ್ತಾಂಶ ನಮೂದಕ ಹುದ್ದೆಗಳನ್ನು ಕೆ.ಪಿ.ಎಸ್.ಸಿ ಮೂಲಕ ಭರ್ತಿ ಮಾಡಿಕೊಳ್ಳಲಾಗುತ್ತಿದೆ.<br><br>• ಕಾರ್ಯನಿರ್ವಾಹಕ ಬೋಧಕ ಹುದ್ದೆಗಳಾದ ಬೋಧಕ, ಸಹಾಯಕ ಬೋಧಕ ಮತ್ತು ಸೈನಿಕ ಹುದ್ದೆಗಳನ್ನು ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳು-2010ರನ್ವಯ ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ಸದರಿ ಹುದ್ದೆಗಳನ್ನು ಡಿಜಿಪಿ, ನೇಮಕಾತಿ ವಿಭಾಗ, ಬೆಂಗಳೂರು ಇವರ ಮುಖಾಂತರ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ದೈಹಿಕ ಪರೀಕ್ಷೆಗಳಾದ ದೈಹಿಕ ಮಾನದಂಡಗಳು, ದೈಹಿಕ ದಕ್ಷತೆ ಹಾಗೂ ದೈಹಿಕ ಸಹಿಷ್ಣುತೆ ಪರೀಕ್ಷೆಗಳ ಮೂಲಕ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇರೆಗೆ ಆಯ್ಕೆ ಮಾಡಿ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ.<br><br>**ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ:**<br>ಇಲಾಖಾ ವತಿಯಿಂದ ನೇಮಕಾತಿ ಮಾಡಿಕೊಳ್ಳುವ ಸಂದರ್ಭದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪಾರದರ್ಶಕವಾಗಿ ಪರೀಕ್ಷೆಗಳನ್ನು ನಡೆಸಿ ನೇಮಕ ಮಾಡಿಕೊಳ್ಳಲಾಗಿದೆ. |

| | | |
|---|---|---|
| | | **<u>ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ:</u>**<br>ಇಲಾಖೆಯಲ್ಲಿ ನೇರ ನೇಮಕಾತಿಯಡಿ ಗ್ರೂಫ್ - ಬಿ ಮತ್ತು ಸಿ ವೃಂದದ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದ್ದು, ಸದರಿ ಹುದ್ದೆಗಳನ್ನು ಕಾಲ ಕಾಲಕ್ಕೆ ಹೊರಡಿಸುವ ವೃಂದ ಮತ್ತು ನೇಮಕಾತಿ ನಿಯಮಗಳ ಅನ್ವಯ ಇಲಾಖೆಯ ನೇಮಕಾತಿ ಸಮಿತಿ ಹಾಗೂ ಕೆ.ಪಿ.ಎಸ್.ಸಿ. ಮೂಲಕ ಹಂಚಿಕೆಯಾದ ಹುದ್ದೆಗಳಿಗೆ ನೇಮಕಾತಿ ನೀಡಲಾಗುತ್ತಿದೆ.<br><br>**<u>ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮ:-</u>**<br>ಪ್ರಸ್ತುತ ನಿಗಮದ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಯ ಕುರಿತು ಪರಿಶೀಲಿಸಲಾಗುತ್ತಿರುವುದರಿಂದ ಖಾಲಿ ಇರುವ ಹುದ್ದೆಗಳನ್ನು ನೇಮಕಾತಿ ಮಾಡಿರುವುದಿಲ್ಲ. |
| ಆ | ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಿಕೊಳ್ಳಲು ಹೊಸ ನಿಯಮ ಯಾವುದಾದರೂ ಜಾರಿ ಮಾಡಲಾಗಿದೆಯೇ; | ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಿಕೊಳ್ಳಲು ಹೊಸ ನಿಯಮವನ್ನು ಜಾರಿ ಮಾಡಿರುವುದಿಲ್ಲ. ಆದರೆ ಕಾನೂನು ಸುವ್ಯವಸ್ಥೆ ಕಾಪಾಡಲು ಕೆಳಕಂಡ ಕ್ರಮಗಳನ್ನು ಹೊಸದಾಗಿ ಕೈಗೊಳ್ಳಲಾಗುತ್ತಿದೆ.<br><br>• ಜಿಲ್ಲಾ ಮಟ್ಟದಲ್ಲಿ ಪಿಐ ದರ್ಜೆಯ ಅಧಿಕಾರಿ ಮತ್ತು ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಪಿಎಸ್ಐ ದರ್ಜೆಯ ಅಧಿಕಾರಿ ನೇತೃತ್ವದಲ್ಲಿ ಸಾಮಾಜಿಕ ಜಾಲತಾಣ ನಿರ್ವಹಣ ಕೋಶವನ್ನು ತೆರೆಯಲಾಗಿರುತ್ತದೆ.<br><br>• ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ನೈತಿಕ ಪೊಲೀಸ್ ಗಿರಿ ತಡೆಗಟ್ಟಲು ಕಾಲೇಜು / ಶಾಲೆಗಳು, ಉದ್ಯಾನವನ ಜನಸಂದಣಿ ಪ್ರದೇಶ ಹಾಗೂ ಪ್ರವಾಸಿ ತಾಣಗಳ ಬಳಿ ಪೊಲೀಸರನ್ನು ನಿಯೋಜಿಸಲಾಗುತ್ತಿದೆ.<br><br>• ಪ್ರತಿ ಪೊಲೀಸ್ ಠಾಣಾಧಿಕಾರಿಗಳು ಮತ್ತು ಇಬ್ಬರು ಸಿಬ್ಬಂದಿಯವರಿಗೆ ಸೋಷಿಯಲ್ ಮೀಡಿಯಾ ಮಾನಿಟರಿಂಗ್ ಸೆಲ್ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ. ಈ ಅಧಿಕಾರಿ ಮತ್ತು ಸಿಬ್ಬಂದಿಯವರೂ ಸಹ ಸಾಮಾಜಿಕ ಮಾಧ್ಯಮಗಳಲ್ಲಿ ಸಾಮರಸ್ಯವನ್ನು ಹಾಳುಗೆಡವುವಂತಹ ಪೋಸ್ಟರ್‌ಗಳ ಬಗ್ಗೆ ನಿಗಾ ವಹಿಸುತ್ತಿರುತ್ತಾರೆ.<br><br>• 112(ಇ.ಆರ್.ಎಸ್.ಎಸ್) ತುರ್ತು ಸ್ಪಂದನೆ ಸೇವಾ ವ್ಯವಸ್ಥೆಯನ್ನು ಸಾರ್ವಜನಿಕರಿಗೆ ಪರಿಚಯಿಸಲಾಗಿದ್ದು, ಸಾರ್ವಜನಿಕರ ಸಮಸ್ಯೆಗಳಿಗೆ ಶೀಘ್ರ ಸ್ಪಂದನೆಯನ್ನು ನೀಡಲು ಸಹಾಯಕವಾಗಿದೆ.<br><br>• ಅಪರಾಧಗಳನ್ನು ತಡೆಗಟ್ಟುವ ಹಿನ್ನೆಲೆಯಲ್ಲಿ ನಗರದ ರಸ್ತೆಗಳಿಗೆ ಅಭಿಮುಖವಾಗಿ ಕಟ್ಟಡಗಳಲ್ಲಿ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಅಳವಡಿಸಿ ಪಬ್ಲಿಕ್ ಸೇಫ್ಟಿ ಕಾಯ್ದೆಯಂತೆ ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಇ | ರಾಜ್ಯದಲ್ಲಿರುವ ಎಲ್ಲಾ ಪೊಲೀಸ್ ಠಾಣೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲಾಗಿದೆಯೇ? | ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಮೂಲಭೂತ ಸೌಕರ್ಯಗಳಾದಂತಹ ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ಸಂಪರ್ಕ, ಪಿಠೋಪಕರಣಗಳು ಮತ್ತು ಶೌಚಾಲಯಗಳನ್ನು ಒದಗಿಸಲಾಗಿರುತ್ತದೆ. |

**ಸಂಖ್ಯೆ: ಹೆಚ್‌ಡಿ 64 ಎಸ್‌ಎಎಸ್‌ಹೆಚ್ 2023**

(ಡಾ|| ಜಿ. ಪರಮೇಶ್ವರ)
ಗೃಹ ಸಚಿವರು